**1 ನೇ ಹೆಚ್ಚುವರಿ ವಿಶೇಷ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ,**
**ಚಿಕ್ಕಮಗಳೂರು**

ಸ್ಪೆಷಲ್ ಮೊಕದ್ದಮೆ ನಂಃ 86 /2023

| | | | |
|---|---|---|---|
| ಸಾಕ್ಷಿದಾರರ ಹೆಸರು | - | ಕೆ.ಆರ್.ಮಹೇಶ್ | ಪಿಡಬ್ಲೂ -01 |
| ತಂದೆಯ ಹೆಸರು | - | ರಾಜಪ್ಪ | ಸಿಡಬ್ಲೂ -02 |
| ವಯಸ್ಸು | - | 43 ವರ್ಷ | |
| ಉದ್ಯೋಗ | - | ಕೂಲಿ ಕೆಲಸ | |
| ವಾಸ ಸ್ಥಳ | - | ಕಡೂರು | |

ದಿನಾಂಕಃ 30-11-2024 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.

ಮುಖ್ಯ ವಿಚಾರಣೆ : ವಿಶೇಷ ಸರ್ಕಾರಿ ಅಭಿಯೋಜಕರಿಂದ-

1. ನ್ಯಾಯಾಲಯದಲ್ಲಿ ಹಾಜರಿರುವ ಆರೋಪಿತರು ಯಾರೆಂದು ನನಗೆ ಗೊತ್ತಿಲ್ಲ. ಚಾಸಾ.1, 4 ಮತ್ತು ಸಹ ಪಂಚರಾದ ಚಾಸಾ.3 ರವರು ನನಗೆ ಗೊತ್ತಿಲ್ಲ.

2. ಸಾಕ್ಷಿಗೆ ಎರಡು ದಾಖಲೆಗಳನ್ನು ತೋರಿಸಲಾಗಿ ಅವುಗಳಲ್ಲಿರುವ ತನ್ನ ಸಹಿಗಳನ್ನು ನೋಡಿ ಗುರುತಿಸಿರುತ್ತಾರೆ. ಸದರಿ ದಾಖಲೆಗಳು ದಿನಾಂಕ 02-02-2023 ರಂದು ಪೊಲೀಸರು ಪಂಚನಾಮೆಯನ್ನು ಜರುಗಿಸಲು ಸಹಕರಿಸುವಂತೆ ಸಾಕ್ಷಿಗೆ ನೀಡಿದ್ದಾರೆ ಎಂದು ಹೇಳಲಾದ ನೋಟೀಸು ಮತ್ತು ಅದೇ ದಿನ ಸಾಕ್ಷಿಯ ಸಮಕ್ಷಮ ಪೊಲೀಸರು ಜರುಗಿಸಿದ್ದಾರೆ ಎಂದು ಹೇಳಲಾದ ಪಂಚನಾಮೆಯಾಗಿದ್ದು ಅವುಗಳನ್ನು ಕ್ರಮವಾಗಿ ನಿಪಿ.1 ಮತ್ತು ನಿಪಿ.2 ಎಂದು ಅವುಗಳಲ್ಲಿರುವ ಸಾಕ್ಷಿಯ ಸಹಿಗಳನ್ನು ನಿಪಿ.1(ಎ) ಮತ್ತು ನಿಪಿ.2(ಎ) ಎಂದು

ಗುರುತಿಸಲಾಯಿತು.

3. ಸಾಕ್ಷಿಗೆ ಒಂದು ದಾಖಲೆಯನ್ನು ತೋರಿಸಲಾಗಿ ಅದರಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿರುತ್ತಾರೆ. ಸದರಿ ದಾಖಲೆ ದಿನಾಂಕ 02-02-2023 ರಂದು ಸಾಕ್ಷಿಯ ಸಮಕ್ಷಮ ಪೊಲೀಸರು ಜರುಗಿಸಿದ್ದಾರೆ ಎಂದು ಹೇಳಲಾದ ಪಂಚನಾಮೆಯಾಗಿದ್ದು ಅದನ್ನು ನಿಪಿ.3 ಎಂದು ಅದರಲ್ಲಿರುವ ಸಾಕ್ಷಿಯ ಸಹಿಗಳನ್ನು ನಿಪಿ.3(ಎ) ಎಂದು ಗುರುತಿಸಲಾಯಿತು.

4. ಸಾಕ್ಷಿಗೆ ಮತ್ತೆರಡು ದಾಖಲೆಗಳನ್ನು ತೋರಿಸಲಾಗಿ ಅವುಗಳಲ್ಲಿರುವ ತನ್ನ ಸಹಿಗಳನ್ನು ನೋಡಿ ಗುರುತಿಸಿರುತ್ತಾರೆ. ಸದರಿ ದಾಖಲೆಗಳು ದಿನಾಂಕ 02-02-2023 ರಂದು ಪೊಲೀಸರು ಪಂಚನಾಮೆಯನ್ನು ಜರುಗಿಸಲು ಸಹಕರಿಸುವಂತೆ ಸಾಕ್ಷಿಗೆ ನೀಡಿದ್ದಾರೆ ಎಂದು ಹೇಳಲಾದ ನೋಟೀಸು ಮತ್ತು ಅದೇ ದಿನ ಸಾಕ್ಷಿಯ ಸಮಕ್ಷಮ ಪೊಲೀಸರು ಜರುಗಿಸಿದ್ದಾರೆ ಎಂದು ಹೇಳಲಾದ ಪಂಚನಾಮೆಯಾಗಿದ್ದು ಅವುಗಳನ್ನು ಕ್ರಮವಾಗಿ ನಿಪಿ.4 ಮತ್ತು ನಿಪಿ.5 ಎಂದು ಅವುಗಳಲ್ಲಿರುವ ಸಾಕ್ಷಿಯ ಸಹಿಗಳನ್ನು ನಿಪಿ.5(ಎ) ಮತ್ತು ನಿಪಿ.5(ಎ) ಎಂದು ಗುರುತಿಸಲಾಯಿತು.

5. ಈಗ್ಗೆ 2 ವರೆ ವರ್ಷಗಳ ಹಿಂದೆ ಕಡೂರಿನ ಬನ್ನಿಮರದ ರಸ್ತೆಯಲ್ಲಿ ಶನೇಶ್ವರ ದೇವಸ್ಥಾನದ ಹತ್ತಿರ ಕೆಲಸ ಮುಗಿಸಿ ಊಟಕ್ಕೆಂದು ಬರುತ್ತಿದ್ದ ಸಮಯದಲ್ಲಿ ಜನರು ಗುಂಪು ಕಟ್ಟಿಕೊಂಡು ನಿಂತಿದ್ದರು. ಆಗ ಪೊಲೀಸರೊಬ್ಬರು ನನ್ನನ್ನು ಕರೆದು ಅಲ್ಲಿ ನಿಂತುಕೊಳ್ಳಿ ಫೋಟೋ ತೆಗೆದುಕೊಳ್ಳುತ್ತೇನೆಂದು ಹೇಳಿ

ನನ್ನನ್ನು ನಿಲ್ಲಿಸಿ ಫೋಟೋ ತೆಗೆದುಕೊಂಡು ನಂತರ ಕಡೂರು ಪೊಲೀಸ್ ಠಾಣೆಗೆ ನನ್ನನ್ನು ಕರೆದುಕೊಂಡು ಹೋಗಿ ಅಲ್ಲಿ ಮೇಲೆ ಗುರುತಿಸಿದ ಸಹಿಗಳನ್ನು ಪಡೆದುಕೊಂಡರು. ಆದರೆ ಯಾವ ವಿಚಾರಕ್ಕೆ ಪೊಲೀಸರು ಫೋಟೋಗಳನ್ನು ತೆಗೆದುಕೊಂಡಿದ್ದಾರೆ ಮತ್ತು ನನ್ನ ಸಹಿಗಳನ್ನು ಪಡೆದುಕೊಂಡಿದ್ದಾರೆಂದು ನನಗೆ ಗೊತ್ತಿಲ್ಲ. ನಾನು ಸಹಿ ಮಾಡಿರುವ ದಾಖಲೆಗಳಲ್ಲಿ ಬರೆದಿರುವ ವಿಚಾರಗಳು ನನಗೆ ಗೊತ್ತಿಲ್ಲ ಮತ್ತು ಅವುಗಳನ್ನು ಪೊಲೀಸರು ನನಗೆ ಓದಿ ಹೇಳಿಲ್ಲ. ನನ್ನನ್ನು ಹೊರತುಪಡಿಸಿ ಸದರಿ ದಾಖಲೆಗಳಿಗೆ ಬೇರೆ ಯಾರು ಸಹಿ ಮಾಡಿದ್ದಾರೆ ಎಂದು ನನಗೆ ಗೊತ್ತಿಲ್ಲ. ಪೊಲೀಸರು ನನ್ನ ಸಮಕ್ಷಮ ಯಾವುದೇ ಪಂಚನಾಮೆಯನ್ನು ಜರುಗಿಸಿಲ್ಲ ಮತ್ತು ಏನನ್ನೂ ಅಮಾನತುಪಡಿಸಿಕೊಂಡಿಲ್ಲ.

6. ಸಾಕ್ಷಿಗೆ 5 ಫೋಟೋಗಳನ್ನು ತೋರಿಸಲಾಗಿ ಅವುಗಳಲ್ಲಿ ತನ್ನ ಇರುವಿಕೆಯನ್ನು ನೋಡಿ ಗುರುತಿಸಿರುತ್ತಾರೆ. ಸದರಿ ಫೋಟೋಗಳನ್ನು ಒಟ್ಟಾಗಿ ನಿಪಿ.6 ರಿಂದ ಪಿ.10 ಎಂದು ಗುರುತಿಸಲಾಯಿತು. ಸದರಿ ಫೋಟೋಗಳಿಗೆ ಮೇಲೆ ಹೇಳಿದಂತೆ ಪೊಲೀಸರು ಹೇಳಿದ್ದರಿಂದ ನಿಂತುಕೊಂಡಿರುತ್ತೇನೆ. ಆದರೆ ಯಾವ ವಿಚಾರಕ್ಕೆಂದು ನನಗೆ ಗೊತ್ತಿಲ್ಲ.

(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ ಪಾಟೀ ಸವಾಲು ಮಾಡಲು ಮಾನ್ಯ ಅಭಿಯೋಜಕರು ಅನುಮತಿ ಕೇಳಿರುತ್ತಾರೆ ದಾಖಲೆಗಳನ್ನು ಪರಿಶೀಲಿಸಿ ಅನುಮತಿ ನೀಡಲಾಯಿತು)

ಪಾಟೀ ಸವಾಲುಃ ಸರ್ಕಾರಿ ಅಭಿಯೋಜಕರಿಂದಃ-

7. ದಿನಾಂಕ 02.02.2023 ರಂದು ಮಹಜರ್ ಜರುಗಿಸಲು ಸಹಕರಿಸುವಂತೆ ಪೊಲೀಸರು ನಿಮಗೆ ಮತ್ತು ಚಾಸಾ.3 ರವರಿಗೆ ನಿಪಿ.1 ರಂತೆ ನೋಟೀಸನ್ನು ಜಾರಿ ಮಾಡಿದ್ದರು ಎಂದರೆ ಸರಿಯಲ್ಲ. ಅದಕ್ಕೆ ನಾನು ಒಪ್ಪಿಕೊಂಡಿದ್ದೇನೆ ಎಂದರೆ ಸರಿಯಲ್ಲ. ನಂತರ ಅದೇ ದಿನ ಕಡೂರು ಪೊಲೀಸ್ ಠಾಣೆಯ ಆವರಣದಲ್ಲಿ ಚಾಸಾ.4 ರವರು ತನ್ನ ಬಾಬ್ತು ಕೆಎ-13-ಸಿ-1480 ನೊಂದಣಿ ಸಂಖ್ಯೆಯುಳ್ಳ Ape PIAGGIO ಕಂಪನಿಯ ಆಟೋವನ್ನು ಮತ್ತು ಒಂದು ಕಾಡುಜಾತಿಯ ಕಲ್ಲನ್ನು ಹಾಜರುಪಡಿಸಿ ಅದನ್ನು ಆರೋಪಿತರು ಕೃತ್ಯಕ್ಕೆ ಬಳಸಿದ್ದಾಗಿ ತಿಳಿಸಿದರು ಎಂದರೆ ಸರಿಯಲ್ಲ. ಸದರಿ ಆಟೋ ಮತ್ತು ಕಲ್ಲನ್ನು ಪೊಲೀಸರು ನನ್ನ ಮತ್ತು ಚಾಸಾ.3 ರವರ ಸಮಕ್ಷಮ ನಿಪಿ.2 ರಂತೆ ಮಧ್ಯಾಹ್ಣ 12.45 ಗಂಟೆಯಿಂದ 3.30 ಗಂಟೆಯವರೆಗೆ ಪಂಚನಾಮೆ ಜರುಗಿಸಿ ಅಮಾನತು ಪಡಿಸಿಕೊಂಡಿದ್ದಾರೆ ಎಂದರೆ ಸರಿಯಲ್ಲ. ಸದರಿ ಪಂಚನಾಮೆಯನ್ನು ಜರುಗಿಸುವ ಸಲುವಾಗಿ ಪೊಲೀಸರು ನಿಪಿ.10 ರಂತೆ ಫೋಟೋ ತೆಗೆದುಕೊಂಡಿರುತ್ತಾರೆ ಎಂದರೆ ಸರಿಯಲ್ಲ.

8. ನಂತರ ಅದೇ ದಿನ ಪೊಲೀಸರು ನಿಮಗೆ ಮತ್ತು ಚಾಸಾ.3 ರವರಿಗೆ ಮಹಜರ್ ಜರುಗಿಸಲು ಸಹಕರಿಸುವಂತೆ ಪೊಲೀಸರು ನಿಪಿ.4 ರಂತೆ ನೋಟೀಸನ್ನು ಜಾರಿ ಮಾಡಿದ್ದರು ಎಂದರೆ ಸರಿಯಲ್ಲ. ಅದಕ್ಕೆ ನಾನು ಒಪ್ಪಿಕೊಂಡಿದ್ದೆನು ಎಂದರೆ ಸರಿಯಲ್ಲ. ನಂತರ ಕಡೂರು ನಗರ ಶನೇಶ್ವರ ದೇವಸ್ಥಾನದಿಂದ ಬನ್ನಿರುಮರ ಕಡೆಗೆ ಬರುವ ರಸ್ತೆಯಲ್ಲಿ ಬರುವ ಜಯಪ್ಪರವರ

ವಾಸದ ಮನೆಯ ಮುಂಭಾಗದಲ್ಲಿ ಚಾಸಾ.4 ರವರು ಪೊಲೀಸರಿಗೆ ಕೃತ್ಯ ನಡೆದ ಸ್ಥಳವನ್ನು ತೋರಿಸಿ ಆಟೋ ರಿಕ್ಷಾದ ಮುಂಭಾಗದ ಗ್ಲಾಸಿನ ಒಡೆದ 19 ಸಣ್ಣ ಗಾಜಿನ ಚೂರುಗಳನ್ನು ಹಾಜರುಪಡಿಸಿದ್ದಾರೆ ಎಂದರೆ ಸರಿಯಲ್ಲ. ಸದರಿ ಸ್ಥಳದಲ್ಲಿ ಪೊಲೀಸರು ನನ್ನ ಮತ್ತು ಚಾಸಾ.3 ರವರ ಸಮಕ್ಷಮ ನಿಪಿ.5 ರಂತೆ ಮಧ್ಯಾಹ್ನ 1.45 ಗಂಟೆಯಿಂದ 2.45 ಗಂಟೆಯವರೆಗೆ ಪಂಚನಾಮೆ ಜರುಗಿಸಿ ಸದರಿ ಗಾಜಿನ ಚೂರುಗಳನ್ನು ಅಮಾನತು ಪಡಿಸಿಕೊಂಡಿದ್ದಾರೆ ಎಂದರೆ ಸರಿಯಲ್ಲ. ಸದರಿ ಪಂಚನಾಮೆಯನ್ನು ಜರುಗಿಸುವ ಸಲುವಾಗಿ ಪೊಲೀಸರು ನಿಪಿ.6 ಮತ್ತು ಪಿ.7 ರಂತೆ ಫೋಟೋಗಳನ್ನು ತೆಗೆದುಕೊಂಡಿರುತ್ತಾರೆ ಎಂದರೆ ಸರಿಯಲ್ಲ.

9. ನಂತರ ಅದೇ ದಿನ ಕಡೂರು ಸಾರ್ವಜನಿಕ ಆಸ್ಪತ್ರೆಯ ಹೊರಭಾಗದ ಆವರಣದಲ್ಲಿರುವ ತುರ್ತು ಚಿಕಿತ್ಸಾ ವಿಭಾಗಕ್ಕೆ ಹೋಗುವ ಸ್ಥಳದಲ್ಲಿ ಚಾಸಾ.6 ರವರು ಪೊಲೀಸರಿಗೆ ನನ್ನ ಮತ್ತು ಚಾಸಾ.3 ರವರ ಸಮಕ್ಷಮ ಕೃತ್ಯ ನಡೆದ ಸ್ಥಳವನ್ನು ತೋರಿಸಿದ್ದಾರೆ ಎಂದರೆ ಸರಿಯಲ್ಲ. ಸದರಿ ಸ್ಥಳದಲ್ಲಿ ಪೊಲೀಸರು ನನ್ನ ಮತ್ತು ಚಾಸಾ.3 ರವರ ಸಮಕ್ಷಮ ನಿಪಿ.3 ರಂತೆ ಮಧ್ಯಾಹ್ನ 3.00 ಗಂಟೆಯಿಂದ 4.15 ಗಂಟೆಯವರೆಗೆ ಪಂಚನಾಮೆ ಜರುಗಿಸಿ ನನ್ನ ಸಹಿಯನ್ನು ಪಡೆದಿದ್ದಾರೆ ಎಂದರೆ ಸರಿಯಲ್ಲ. ಸದರಿ ಪಂಚನಾಮೆಯನ್ನು ಜರುಗಿಸುವ ಸಲುವಾಗಿ ಪೊಲೀಸರು ನಿಪಿ.8 ಮತ್ತು ಪಿ.9 ರಂತೆ ಫೋಟೋಗಳನ್ನು ತೆಗೆದುಕೊಂಡಿರುತ್ತಾರೆ ಎಂದರೆ ಸರಿಯಲ್ಲ.

10. ನೀವು ಮೇಲೆ ಹೇಳಿದ ಪಂಚನಾಮೆಗಳಿಗೆ

ಸಹಕರಿಸಿದ್ದರೂ ಸಹ ಈಗ ಆರೋಪಿತರೊಂದಿಗೆ ಶಾಮೀಲಾಗಿ ಅವರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ಹೇಳುತ್ತಿದ್ದೀರಿ ಎಂದರೆ ಸರಿಯಲ್ಲ.

ಪಾಟೀ ಸವಾಲು: ಆರೋಪಿತರ ಪರ ವಕೀಲರು ಸಾಕ್ಷಿಯ ಪಾಟೀ ಸವಾಲು ಇಲ್ಲವೆಂದು ನುಡಿದಿರುತ್ತಾರೆ.

(ನನ್ನ ಉಕ್ತಲೇಖನಕ್ಕೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯ್ತು)

ಓ.ಹೇ.ಕೇ.ಸ.ಇ.ಎ.ಒ.

ಸಹಿ/-
(ಭಾನುಮತಿ ಬಿ.ಸಿ)
1 ನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ಚಿಕ್ಕಮಗಳೂರು.

ಸಾಕ್ಷಿಯ ಸಹಿ